ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಸೋಮವಾರ, ದಿನಾಂಕ : 01 ನೇ ಫೆಬ್ರವರಿ, 2021

ಕೇಂದ್ರ ಸರ್ಕಾರದಿಂದ ಘೋಷಿತವಾದ "ರಾಷ್ಟ್ರೀಯ ಶಿಕ್ಷಣ ನೀತಿ" ಬಗ್ಗೆ

ಶ್ರೀಕವಟಗಿಮಠಮಹಾಂತೇಶ್ಮಲ್ಲಿಕಾರ್ಜುನ(ಸ್ಥಳೀಯಸಂಸ್ಥೆಗಳಕ್ಷೇತ್ರ):-

95 (174) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೇಂದ್ರ ಸರ್ಕಾರ ಘೋಷಣೆ ಮಾಡಿರುವ ಶಿಕ್ಷಣಕ್ಕೆ ಸಂಬಂಧಿಸಿದ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ರಾಜ್ಯ ಸರ್ಕಾರದ ವತಿಯಿಂದ ಜಾರಿಗೆ ತರಲಾಗಿದೆಯೇ;

(ಆ) ದೇಶದ ಶಿಕ್ಷಣ ವ್ಯವಸ್ಥೆಯನ್ನು ಬದಲಿಸುವ ಈ ಯೋಜನೆಯನ್ನು ಸರ್ಕಾರ ಯಾವ ರೀತಿಯಲ್ಲಿ ಅನುಷ್ಠಾನಗೊಳಿಸಲು ಉದ್ದೇಶಿಸಿದೆ;

(ಇ) ಸದರಿ ಯೋಜನೆಯು ಪ್ರಾಥಮಿಕ ಶಿಕ್ಷಣ ಮತ್ತು ಗ್ರಾಮೀಣ ಮತ್ತು ನಗರ ಭಾಗಗಳಲ್ಲಿ ವೃತ್ತಿಪರ ಶಿಕ್ಷಣಕ್ಕೆ ಅನುಕೂಲ ಮಾಡಿಕೊಡಲಿದ್ದು; ಇದನ್ನು ಜಾರಿಗೆ ತರುವ ಬಗ್ಗೆ ಸರ್ಕಾರ ಯಾವ ರೀತಿ ರೂಪುರೇಷೆಗಳನ್ನು ಹಾಕಿಕೊಂಡಿದೆ ;

(ಈ) ಕೇಂದ್ರ ಸರ್ಕಾರದ ಹೊಸ ಶಿಕ್ಷಣ ನೀತಿಯಲ್ಲಿ ಮಾತೃ ಭಾಷೆಗೆ ಹೆಚ್ಚು ಮಹತ್ವ ಕೊಡಲು ನಿರ್ದೇಶಿಸಲಾಗಿದ್ದು, ಸರ್ಕಾರ ಇದನ್ನು ಯಾವ ರೀತಿಯಲ್ಲಿ ಅನುಷ್ಠಾನಗೊಳಿಸಲಿದೆ ?